**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ, ಪಿರಿಯಾಪಟ್ಟಣ.**

**ಸಿ ಸಿ ಸಂಃ 275/2020**

| | | |
|---|---|---|
| ಸಾಕ್ಷಿಯ ಹೆಸರುಃ | ವೇದಾಂತ್ ಕೆ ಎಂ | ಫ್ರಾಸಾಃಃ 1 |
| ತಂದೆ ಹೆಸರುಃ | ಮಲ್ಲೇಶ ಎಂ | ಚಾಸಾಃಃ 2 |
| ವಯಸ್ಸುಃ | 30 ವರ್ಷ | ಪ್ರಮಾಣೀಕರಿಸಿದ<br>ದಿಃ 14/07/2025 |
| ಉದ್ಯೋಗಃ | ವ್ಯವಸಾಯ | |
| ವಾಸ ಸ್ಥಳಃ | ಬೆಟ್ಟದಪುರ ಗ್ರಾಮ,<br>ಪಿರಿಯಾಪಟ್ಟಣ ತಾಲ್ಲೂಕು. | |

**ಮುಖ್ಯ ವಿಚಾರಣೆಃ ಮಾನ್ಯ ಸಸಅ ರಿಂದಃ**

ನನಗೆ ಮೃತ ಪ್ರವೀಣ ಗೊತ್ತು. ನನಗೆ ಆರೋಪಿ ಗೊತ್ತಿಲ್ಲ. ನಾನು ಅಪಘಾತವನ್ನು ಪ್ರತ್ಯಕ್ಷವಾಗಿ ನೋಡಿಲ್ಲ. ಅಪಘಾತ ಹೇಗಾಯಿತು ಯಾರ ತಪ್ಪಿನಿಂದ ಆಯಿತು ಎಂದು ಗೊತ್ತಿಲ್ಲ. ಪೊಲೀಸರು ಸ್ಥಳಕ್ಕೆ ಬಂದು ಸ್ಥಳ ಮಹಜರ್ ಕ್ರಮ ಜರುಗಿಸಿಲ್ಲ, ಯಾವುದೇ ವಾಹನವನ್ನು ಅಮಾನತ್ತು ಪಡಿಸಿಕೊಂಡಿಲ್ಲ. ನಾನು ಯಾವುದೇ ಹೇಳಿಕೆ ನೀಡಿಲ್ಲ. ಸಾಕ್ಷಿಯು ಮಹಜರ್ ನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿ.ಪಿ.1** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.1(ಎ)** ಎಂದು ಗುರುತಿಸಲಾಯಿತು.

**(ಈ ಸಮಯದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ. ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಸಸಅ ರವರಿಂದಃ**

2. ದಿಃ 15/02/2020 ರಂದು ಬೆಳಿಗ್ಗೆ 2.30 ಗಂಟೆ ಸಮಯದಲ್ಲಿ ಚಾಸಾ-3 ರವರ ಜಮೀನಿನ ಹತ್ತಿರ 1 ನೇ ಆರೋಪಿ, 2 ನೇ ಆರೋಪಿಯ ಟ್ರಾಕ್ಟರ್ ನಲ್ಲಿ ಉಳುಮೆ ಮಾಡುತ್ತಿದ್ದಾಗ, 1 ನೇ ಆರೋಪಿತ ಮೃತ ಪ್ರವೀಣ್ ರವರನ್ನು ಟ್ರಾಕ್ಟರ್ ನಲ್ಲಿ ಕೂರಿಸಿಕೊಂಡು ಅತಿವೇಗ ಮತ್ತು ನಿರ್ಲಕ್ಷ್ಯತೆಯಿಂದ ಉಳುಮೆ ಮಾಡುತ್ತಿದ್ದಾಗ, ಗದ್ದೆಯ ಹಂಚಿನಲ್ಲಿ 1 ನೇ ಆರೋಪಿತ ಟ್ರಾಕ್ಟರನ್ನು ಚಾಲನೆ ಮಾಡಿದಾಗ ಟ್ರಾಕ್ಟರ್ ಪಲ್ಟಿಯಾಗಿ ಅದರ ಅಡಿಯಲ್ಲಿ ಮೃತ ಪ್ರವೀಣ ಸಿಲುಕಿಕೊಂಡು ಎದೆ, ಹೊಟ್ಟೆ ಮತ್ತು ಕೈಕಾಲುಗಳಿಗೆ ಗಾಯವಾಗಿ ಸ್ಥಳದಲ್ಲೇ ಮೃತಪಟ್ಟಿರುತ್ತಾರೆ ಎಂದರೆ ಸರಿಯಲ್ಲ. ಈ ಬಗ್ಗೆ ನಾನು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು **ನಿಪಿ.2** ಎಂದು ಗುರುತಿಸಲಾಯಿತು.

3. ನಂತರ ಪೊಲೀಸರು ದಿಃ15/02/2020 ರಂದು ಅಪಘಾತ ಸ್ಥಳಕ್ಕೆ ಬೇಟಿ ನೀಡಿ, ನಿಪಿ.1 ರಂತೆ ಮಹಜರ್ ಕ್ರಮ ಜರುಗಿಸಿ, ಸ್ಥಳದಲ್ಲಿ ನನ್ನ ಸಹಿ ಪಡೆದು, ಸ್ಥಳದಿಂದ ಟ್ರಾಕ್ಟರನ್ನು ಅಮಾನತ್ತು ಪಡಿಸಿಕೊಂಡರು ಎಂದರೆ ಸರಿಯಲ್ಲ. ಈ ಎಲ್ಲಾ ವಿಚಾರ ಗೊತ್ತಿದ್ದರೂ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ** ಇಲ್ಲ.

**ಮರು ವಿಚಾರಣೆಃ** ಇಲ್ಲ.

**ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು**
**ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.**

**ಹೆಃಸಿ.ನ್ಯಾ ಹಾಗೂ ಪ್ರ.ದ.ನ್ಯಾದಂ.**
**ಪಿರಿಯಾಪಟ್ಟಣ.**